# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ ಕಛೇರಿಯಲ್ಲಿ ದಿನಾಂಕ: 09-11-2021 ರಂದು ನಡೆದ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಕಛೇರಿ ಆದೇಶದ ಸಂಖ್ಯೆ: ಐ12(5)ಪಿಆರ್/35/2020-21, ದಿನಾಂಕ: 21-09-2020 ರ ಆದೇಶದಂತೆ **ನವೆಂಬರ್-2021**ರ ಮಾಹೆಯ ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ದಿನಾಂಕ: 09-11-2021 ರಂದು ನಡೆಸಲಾಯಿತು.

**ಸಭೆಗೆ ಹಾಜರಿದ್ದವರ ವಿವರಗಳು**

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಬಿ. ಡಿ. ಮಂಜುನಾಥ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು ವಾರ್ಡ್-112 (ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು, ದೊಮ್ಮಲೂರು ಉಪ ವಿಭಾಗ) |
| 2 | ಎನ್.ಎಸ್. ಪ್ರಕಾಶ್ | ಕಾರ್ಯದರ್ಶಿಗಳು ಮತ್ತು ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ: 112 |
| 3 | ಕುಮಾರ್ | ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಡಬ್ಲ್ಯು.ಎಸ್.ಎಸ್.ಬಿ |
| 4 | ಮಂಜುನಾಥ | ಸಹಾಯಕ ಅಭಿಯಂತರರು ಎಸ್-3, ಬೆಸ್ಕಾಂ |
| 5 | ಡಾ|| ಸೀಮಾ | ಆರೋಗ್ಯ ವೈದ್ಯಾಧಿಕಾರಿಗಳು |
| 6 | ಎಲ್. ಸಗಯನಾಥನ್ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |
| 7 | ಪುರುಷೋತ್ತಮ | ಸಮಿತಿ ಸದಸ್ಯರು & ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 112 |
| 8 | ಮಮತ. ಎಂ.ಹೆಚ್ | ಸಹಾಯಕ ಅಭಿಯಂತರರು, ಬಿ.ಡಬ್ಲ್ಯು.ಎಸ್.ಎಸ್.ಬಿ |
| 9 | ಶಶಿಕುಮಾರ್ | ಕೆಲಸ ಪರಿವೀಕ್ಷಕರು ವಾರ್ಡ್ ಸಂಖ್ಯೆ: 112 |
| 10 | ಪುನಿತ್ ಕುಮಾರ್ | ಬಿ.ಬಿ.ಎಂ.ಪಿ ಟ್ರಾಫಿಕ್ ಇಂಜಿನಿಯರಿಂಗ್ ಸೆಲ್ |

| **ವಾರ್ಡ್ ಸಮಿತಿ ಸಭೆಯಲ್ಲಿ ಹಾಜರಿದ್ದ ಸಮಿತಿ ಸದಸ್ಯರು ಮತ್ತು ಸಾರ್ವಜನಿಕರು** | | |
|---|---|---|
| 1 | ಆರ್. ವಾಸು | ವಾರ್ಡ್ ಸಮಿತಿ ಸದಸ್ಯರು |
| 2 | ಪುಲಿಕೇಶಿ ರೆಡ್ಡಿ | ವಾರ್ಡ್ ಸಮಿತಿ ಸದಸ್ಯರು |
| 3 | ದೇವಣ್ಣ | ವಾರ್ಡ್ ಸಮಿತಿ ಸದಸ್ಯರು |
| 4 | ಪಿ. ಕುಮಾರ್ | ವಾರ್ಡ್ ಸಮಿತಿ ಸದಸ್ಯರು |
| 5 | ಚೇತನ್ ಪಟೇಲ್ | ವಾರ್ಡ್ ಸಮಿತಿ ಸದಸ್ಯರು |
| 6 | ಅಂಜಲಿ | ವಾರ್ಡ್ ಸಮಿತಿ ಸದಸ್ಯರು |
| 7 | ಕಲ್ಯಾಣಿ | ವಾರ್ಡ್ ಸಮಿತಿ ಸದಸ್ಯರು |

ದಿನಾಂಕ: 09-11-2021 ರಂದು ಅಪರಾಹ್ನ 3-00 ಗಂಟೆಗೆ ವಾರ್ಡ್ ಸಂಖ್ಯೆ: 112 ದೊಮ್ಮಲೂರು ವಾರ್ಡಿನ ವಾರ್ಡ್ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಶ್ರೀ. ಬಿ.ಡಿ. ಮಂಜುನಾಥ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ನೋಡಲ್ ಅಧಿಕಾರಿಗಳು ಸಭೆಗೆ ಆಗಮಿಸಿದ್ದ ವಾರ್ಡ್ ಸಮಿತಿ ಸದಸ್ಯರುಗಳನ್ನು, ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಹಾಗೂ ವಾರ್ಡಿನ ನಿವಾಸಿಗಳನ್ನು ಸಭೆಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಿದರು.

ಮು.ತಿ.ನೋ..

**ದಿನಾಂಕ: 09-11-2021ರ ಸಭೆಯಲ್ಲಿ ಸಾರ್ವಜನಿಕರು ಸಲ್ಲಿಸಿದ ಸಮಸ್ಯೆಗಳ ಮನವಿಗಳು ಹಾಗೂ ವಾರ್ಡ್ ಸಮಿತಿ ಸಭೆಯ ನಡಾವಳಿಗಳು**

| ಕ್ರ. ಸಂ | ಚರ್ಚಿಸಿದ ವಿಷಯಗಳು | ಕೈಗೊಂಡ ಕ್ರಮಗಳು |
|---|---|---|
| 1 | The HAL 2nd Stage Civic Amenities and Cultural Association ® Indiranagar, Bangalore ರವರು ಮನವಿ ಸಲ್ಲಿಸಿ ಪಾದಚಾರಿ ಮಾರ್ಗವನ್ನು ಒತ್ತುವರಿ ಮಾಡಿರುವುದನ್ನು ಸರಿಪಡಿಸಲು ಕೋರಿರುತ್ತಾರೆ. | ಸದರಿ ವಿಷಯದ ಬಗ್ಗೆ ವಾರ್ಡಿನ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮಕೈಗೊಳ್ಳಲು ಪತ್ರ ಬರೆಯಲಾಗಿರುತ್ತದೆ. |
| 2 | The HAL 2nd Stage Civic Amenities and Cultural Association ® Indiranagar, Bangalore ರವರು ಮನವಿ ಸಲ್ಲಿಸಿ 12ನೇ ಮುಖ್ಯರಸ್ತೆಯ ಎರಡೂ ಬದಿಯಲ್ಲಿ ಪಾದಚಾರಿ ಮಾರ್ಗದ ಮೇಲೆ ವಾಹನಗಳನ್ನು ನಿಲ್ಲಿಸಿರುವುದರಿಂದ ಸಾರ್ವಜನಿಕರಿಗೆ ನಡೆದಾಡಲು ಸೂಕ್ತ ಜಾಗವಿರುವುದಿಲ್ಲ. ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಕುರಿತು ಪೋಲೀಸ್ ಇನ್ಸ್‌ಪೆಕ್ಟರ್ (ಸಂಚಾರ), ಹಲಸೂರು ಪೋಲೀಸ್ ಠಾಣೆ ರವರಿಗೆ ಇದರ ಬಗ್ಗೆ ಕ್ರಮಕೈಗೊಳ್ಳಲು ಪತ್ರವನ್ನು ಬರೆಯಲಾಗಿರುತ್ತದೆ. |
| 3 | The HAL 2nd Stage Civic Amenities and Cultural Association ® Indiranagar, Bangalore ರವರು ವಾರ್ಡ್ ಸುತ್ತಮುತ್ತ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಅಳವಡಿಸಲು ಕೋರಿರುತ್ತಾರೆ. | ಮುಂದಿನ ಸಾಲಿನ ಆಯವ್ಯಯದಲ್ಲಿ ಸಿ.ಸಿ.ಟಿ.ವಿ ಹಾಕಲು ಆದ್ಯತೆ ನೀಡಲಾಗುವುದು. |
| 4 | ಪಿ. ಕುಮಾರ್ ರವರು ಮನವಿ ಸಲ್ಲಿಸಿ ಇಸ್ಟೋ ಸ್ಲಂನಲ್ಲಿ ಸುಮಾರು 6 ತಿಂಗಳಿನಿಂದ ಕುಡಿಯುವ ನೀರು ಸರಬರಾಜು ಆಗುತ್ತಿಲ್ಲವೆಂದು ತಿಳಿಸಿ ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಕುರಿತು ಸಹಾಯಕ ಕಾರ್ಯಪಾಲಕ ಅಭಿಯಂತರರು, ಎಸ್.ಇ-2 ಉಪವಿಭಾಗ, ಬಿ.ಡಬ್ಲ್ಯೂ.ಎಸ್.ಎಸ್.ಬಿ, ಇಂದಿರಾನಗರ ಕ್ಲಬ್, ಬೆಂಗಳೂರು ರವರಿಗೆ ಪತ್ರ ಬರೆಯಲಾಗಿರುತ್ತದೆ. |
| 5 | ಪಿ. ಕುಮಾರ್ ರವರು ಮನವಿ ಸಲ್ಲಿಸಿ 112 ವಾರ್ಡ್‌ನಲ್ಲಿ ಮಳೆ ಬಂದಿರುವುದರಿಂದ ಬಹಳಷ್ಟು ಪ್ಯಾಚ್ ವರ್ಕ್ ಅನ್ನು ಮಾಡಬೇಕಾಗಿರುತ್ತದೆ ಎಂದು ತಿಳಿಸಿದ್ದು ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಬಗ್ಗೆ ಈಗಾಗಲೇ ವಾರ್ಡ್ ನಂ.112 ವ್ಯಾಪ್ತಿಯಲ್ಲಿ ರಸ್ತೆಗುಂಡಿಗಳನ್ನು ಮುಚ್ಚಲು ವೆಟ್‌ಮಿಕ್ಸ್ ಹಾಕಲಾಗುತ್ತಿರುತ್ತದೆ. ಮಳೆ ನಿಂತ ನಂತರ ಡಾಂಬರೀಕರಣ ಮಾಡಿ ಪೂರ್ಣಗೊಳಿಸಲಾಗುವುದು. |
| 6 | ಪಿ. ಕುಮಾರ್ ರವರು ಮನವಿ ಸಲ್ಲಿಸಿ ಡಾ॥ ರಾಜ್‌ಕುಮಾರ್ ಪಾರ್ಕ್‌ನಲ್ಲಿ ಸುಮಾರು 15 ಲೈಟ್‌ಗಳು ಸರಿಯಿರುವುದಿಲ್ಲ. ಇದನ್ನು ಬದಲಾವಣೆ ಮಾಡಲು ತಿಳಿಸಿದ್ದು, ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಕುರಿತು ಕಾರ್ಯಪಾಲಕ ಅಭಿಯಂತರರು (ವಿದ್ಯುತ್), ಪೂರ್ವ ವಲಯ ರವರಿಗೆ ಪತ್ರ ಬರೆಯಲಾಗಿರುತ್ತದೆ. |
| 7 | ಪಿ. ಕುಮಾರ್ ರವರು ಮನವಿ ಸಲ್ಲಿಸಿ ಪೌರಕಾರ್ಮಿಕರಿಗೆ ಸರಿಯಾದ ಸ್ಥಳವು ಇಲ್ಲದೇ ಬೀದಿಯಲ್ಲಿಯೇ ಕುಳಿತು ಕೊಳ್ಳುತ್ತಾರೆ. ಇದರಿಂದ ಅವರಿಗೆ ಒಂದು ನೆರಳು ಮಾಡಿಕೊಡಲು ತಿಳಿಸಿದ್ದು, ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಬಗ್ಗೆ ಮುಂದಿನ ಆಯವ್ಯಯದಲ್ಲಿ ಯಾವುದೇ ಅನುದಾನ ಬಂದಲ್ಲಿ ಮೊದಲನೇ ಆದ್ಯತೆ ಮೇಲೆ ಕಾಮಗಾರಿಯನ್ನು ಕೈಗೊಳ್ಳಲಾಗುವುದು. |
| 8 | ಪಿ. ಕುಮಾರ್ ರವರು ಮನವಿ ಸಲ್ಲಿಸಿ ಮೂರು ಒಂಟಿ ಮನೆಗಳು (ಸಿದ್ದಾರ್ಥನಗರ) ಮಂಜೂರಾಗಿದ್ದು, ಇವರಿಗೆ ಯಾವುದೇ ರೀತಿಯಲ್ಲಿ ಹಣ ಬಂದಿರುವುದಿಲ್ಲವೆಂದು ತಿಳಿಸಿದ್ದು, ಇದರ ಬಗ್ಗೆ ಕ್ರಮಕೈಗೊಳ್ಳಲು ಕೋರಿರುತ್ತಾರೆ. | ಸದರಿ ವಿಷಯದ ಕುರಿತು ಎರಡು ಒಂಟಿ ಮನೆಗಳ ಅನುದಾನ ಬಿಡುಗಡೆಯಾದ ಕೂಡಲೇ ಬಿಲ್ಲನ್ನು ಪಾವತಿಸಲಾಗುವುದು. ಉಳಿದ ಒಂದು ಒಂಟಿ ಮನೆಗೆ ಸಂಬಂಧಿಸಿದಂತೆ ಈ ಕಛೇರಿಗೆ ಸ್ವತ್ತಿನ ದಾಖಲೆಗಳಾದ ಆಧಾರ್ ಕಾರ್ಡ್, ಪಾನ್‌ಕಾರ್ಡ್, ಬ್ಯಾಂಕ್ ಪಾಸ್‌ಪುಸ್ತಕ, ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣಪತ್ರವನ್ನು ನೀಡಲು ಕೋರಲಾಗಿದ್ದು, ಸದರಿ ದಾಖಲೆಗಳನ್ನು ಈ ಕಛೇರಿಗೆ ಹಾಜರುಪಡಿಸಿದಲ್ಲಿ ಮುಂದಿನ ಅನುದಾನದಲ್ಲಿ ಸೇರಿಸಿಕೊಳ್ಳಲಾಗುವುದು. |

ಕೊನೆಯದಾಗಿ ಕಾರ್ಯದರ್ಶಿಯವರು ಸಭೆಗೆ ಆಗಮಿಸಿದ್ದ ಅಧಿಕಾರಿಗಳಿಗೆ ಮತ್ತು ಸಮಿತಿಯ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವಂದಿಸಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳ ಅಪ್ಪಣೆಯ ಮೇರೆಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

10/11/21

ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 112 ದೊಮ್ಮಲೂರು

**ಪ್ರತಿಯನ್ನು:**

1. ಮಾನ್ಯ ಆಡಳಿತಗಾರರು, ಬಿ.ಬಿ.ಎಂ.ಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿ.ಬಿ.ಎಂ.ಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಆಡಳಿತ), ಬಿ.ಬಿ.ಎಂ.ಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ವಿಶೇಷ ಆಯುಕ್ತರು (ಆರೋಗ್ಯ & ಘ.ತ್ಯಾ.ನಿ), ಬಿ.ಬಿ.ಎಂ.ಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
5. ಮಾನ್ಯ ಜಂಟಿ ಆಯುಕ್ತರು (ಪೂರ್ವ), ಬಿ.ಬಿ.ಎಂ.ಪಿ ರವರ ಅವಗಾಹನೆಗೆ ಸಲ್ಲಿಸಿದೆ.
6. ಮುಖ್ಯ ಅಭಿಯಂತರರು (ಪೂರ್ವ), ಬಿ.ಬಿ.ಎಂ.ಪಿ ರವರ ಅಮೂಲ್ಯ ಅವಗಾಹನೆಗಾಗಿ ಸಲ್ಲಿಸಿದೆ.
7. ವಾರ್ಡ್ ಸಮಿತಿಯ ಸದಸ್ಯರುಗಳ ಮಾಹಿತಿಗಾಗಿ ಕಳುಹಿಸಿದೆ.